**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.**

ಸಂಖ್ಯೆ: ಕಪಂರಾಆ/ಅಭಿವೃದ್ಧಿ/ಗಾಗ್ರಾಪು/ 272/2023 ದಿನಾಂಕ:31.07.2023

## ಸುತ್ತೋಲೆ

**ವಿಷಯ:-** 2022-23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡುವ ಬಗ್ಗೆ.

****

ಕರ್ನಾಟಕ ರಾಜ್ಯದ ಪಂಚಾಯತ್ ರಾಜ್ ವ್ಯವಸ್ಥೆಯಡಿ ಈಗಾಗಲೇ ಹಲವಾರು ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಮತ್ತಷ್ಟು ಪಾರದರ್ಶಕತೆ, ಉತ್ತರದಾಯಿತ್ವ ತರುವ ಉಪಕ್ರಮಗಳಿಗಾಗಿ ವಿನೂತನ ಉತ್ತೇಜನ ಕ್ರಮಗಳನ್ನು ಅನುಸರಿಸಲಾಗುತ್ತಿದೆ. ಇಂತಹ ಕ್ರಮಗಳ ಒಂದು ಭಾಗವಾಗಿ 2013-14ರಿಂದ ಗ್ರಾಮ ಪಂಚಾಯತಿಗಳ ಸಾಧನೆಯನ್ನು ವಿವಿಧ ವಲಯಗಳಿಗೆ ಸಂಬಂಧಿಸಿದಂತೆ ಪ್ರಶ್ನಾವಳಿಗಳ ಮೂಲಕ ಮೌಲ್ಯಮಾಪನ ಮಾಡಿ ರಾಜ್ಯದಲ್ಲಿ ಉತ್ತಮ ಕಾರ್ಯಸಾಧನೆ ಮಾಡಿರುವ ಗ್ರಾಮ ಪಂಚಾಯತಿಗಳನ್ನು ಪ್ರತಿ ತಾಲ್ಲೂಕಿಗೆ ಒಂದರಂತೆ ಗುರುತಿಸಿ, ಗಾಂಧಿ ಗ್ರಾಮ ಪುರಸ್ಕಾರ ಪ್ರಧಾನ ಮಾಡುವ ಜೊತೆಗೆ ರೂ.5.00 ಲಕ್ಷಗಳ ಪ್ರೋತ್ಸಾಹಧನ ನೀಡಿ ಗೌರವಿಸಲಾಗುತ್ತಿದೆ. ಈ ಗ್ರಾಮ ಪಂಚಾಯತಿಗಳು ಮತ್ತಷ್ಟು ಉತ್ತಮ ಕೆಲಸಗಳನ್ನು ಹಾಗೂ ವಿಶೇಷ ಸಾಧನೆಗಳನ್ನು ಮಾಡಿ ಇತರೆ ಗ್ರಾಮ ಪಂಚಾಯತಿಗಳಿಗೂ ಮಾದರಿಯಾಗುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ..

ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಗ್ರಾಮಪಂಚಾಯತಿಗಳನ್ನು ಆಯ್ಕೆ ಮಾಡಲು Google Forms ತಂತ್ರಾಂಶದ ಮೂಲಕ ವಿವಿಧ ಮಾನದಂಡಗಳನ್ನು ನಿಗದಿಪಡಿಸಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗುತ್ತದೆ. ಅದರಂತೆ ತಂತ್ರಾಂಶದ ಮೂಲಕ ಉತ್ತರಿಸಿದ ವಿವರಗಳಿಗನುಗುಣವಾಗಿ ಪ್ರತಿ ತಾಲ್ಲೂಕಿಗೆ ಅತಿಹೆಚ್ಚು ಅಂಕಗಳಿಸಿರುವ ಐದು ಗ್ರಾಮ ಪಂಚಾಯತಿಗಳು ಅರ್ಹತೆ ಪಡೆಯಲಿದ್ದು, ಅರ್ಹತೆ ಪಡೆದ ಗ್ರಾಮ ಪಂಚಾಯತಿಗಳ ಸ್ಥಳ ಪರಿಶೀಲನೆ ಹಾಗೂ ದಾಖಲಾತಿ ಪರಿಶೀಲನೆ ಮಾಡಿ, ಆಯಾ ಜಿಲ್ಲಾ ಪಂಚಾಯತಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯ ಮೂಲಕ ತಾಲ್ಲೂಕಿಗೆ ಒಂದರಂತೆ ಗ್ರಾಮಪಂಚಾಯತಿಗಳನ್ನು ಆಯ್ಕೆ ಮಾಡಿ ಸರ್ಕಾರಕ್ಕೆ ಸಲ್ಲಿಸಲಾಗುತ್ತದೆ. ಸರ್ಕಾರಕ್ಕೆ ಸಲ್ಲಿಕೆಯಾದ ಪ್ರಸ್ತಾವನೆಗಳನ್ನು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿನ ರಾಜ್ಯಮಟ್ಟದ ಪರಾಮರ್ಶೆ ಸಮಿತಿಯ ಮೂಲಕ ಅಂತಿಮಗೊಳಿಸಲಾಗುತ್ತದೆ.

ಅದರಂತೆ, ಪ್ರಸ್ತುತ, ಗ್ರಾಮ ಪಂಚಾಯತಿಗಳ ಉತ್ತಮ ಕಾರ್ಯನಿರ್ವಹಣೆಯನ್ನು ಪ್ರೋತ್ಸಾಹಿಸಲು 2022-23ನೇ ಸಾಲಿಗೆ ಪ್ರತಿ ತಾಲ್ಲೂಕಿಗೆ ಒಂದರಂತೆ ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿ, ಗಾಂಧಿ ಗ್ರಾಮ ಪುರಸ್ಕಾರನೀಡಿ ಗೌರವಿಸಲು ಸರ್ಕಾರವು ನಿರ್ಧರಿಸಿದೆ. 2022-23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಗ್ರಾಮ ಪಂಚಾಯತಿಗಳ ಆಯ್ಕೆ ಪ್ರಕ್ರಿಯೆಯನ್ನು ಈ ಕೆಳಗಿನಂತೆ ನಿಗದಿಪಡಿಸಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. 2022-23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಅರ್ಹತೆ ಪಡೆಯಲು ಗ್ರಾಮ ಪಂಚಾಯತಿಗಳು "ಗಾಂಧಿ ಗ್ರಾಮ ಪುರಸ್ಕಾರ ಯೋಜನೆಗಾಗಿ ಅರ್ಜಿ" ಶೀರ್ಷಿಕೆಯಡಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ Google Forms ತಂತ್ರಾಂಶದಲ್ಲಿ ಲಭ್ಯಗೊಳಿಸಲಾಗುವ ಸಾಂಸ್ಥಿಕ ಮತ್ತುಪ್ರಗತಿ ಸೂಚಕಗಳ ಪ್ರಶ್ನೆಗಳಿಗೆ ಉತ್ತರಿಸುವ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು (ಅನುಬಂಧ ಲಗತ್ತಿಸಿದೆ).
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿಷಯಗಳಿಗೆ ಸಂಬಂಧಿಸಿದಂತೆ ಪಂಚತಂತ್ರ 2.0 ತಂತ್ರಾಂಶ, ಇ-ಗ್ರಾಮ ಸ್ವರಾಜ್ ತಂತ್ರಾಂಶ ಹಾಗೂ

ನರೇಗಾ ತಂತ್ರಾಂಶಗಳಲ್ಲಿ ನಿಗದಿತ ಸಮಯದೊಳಗೆ ಪ್ರಗತಿ ವಿವರಗಳನ್ನು ಇಂಧೀಕರಿಸಿರುವ ಗ್ರಾಮ ಪಂಚಾಯಿತಿಗಳನ್ನು 2022-23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಆಯ್ಕೆ ಮಾಡುವುದು.

3. **ಹಿಂದಿನ 2 ಸಾಲುಗಳಲ್ಲಿ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಆಯ್ಕೆಯಾದ ಗ್ರಾಮ ಪಂಚಾಯಿತಿಗಳನ್ನು ಹೊರತುಪಡಿಸಿ, 2022-23 ನೇಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡುವುದು.**
4. ಪ್ರತಿ ತಾಲ್ಲೂಕಿನಲ್ಲಿ ಅತಿ ಹೆಚ್ಚು ಅಂಕ ಪಡೆದ ಐದು ಗ್ರಾಮ ಪಂಚಾಯತಿಗಳು ಪುರಸ್ಕಾರಕ್ಕೆ ಅರ್ಹತೆ ಪಡೆಯಲಿವೆ. ಈ ಗ್ರಾಮ ಪಂಚಾಯತಿಗಳ ವಿವರಗಳನ್ನು ಆಯಾ ಜಿಲ್ಲಾ ಪಂಚಾಯತಿಗಳಿಗೆ ಕಳುಹಿಸಿಕೊಡಲಾಗುವುದು (ಈ ಐದು ಗ್ರಾಮ ಪಂಚಾಯತಿಗಳು ಸಮಾನ ಅಂಕಗಳನ್ನು ಪಡೆದಿದ್ದಲ್ಲಿ ಗ್ರಾಮ ಪಂಚಾಯತಿಗಳ ಸಂಖ್ಯೆ ಸಂದರ್ಭಾನುಸಾರ ಹೆಚ್ಚಾಗಬಹುದು)
5. ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾ ಪರಿಶೀಲನಾ/ಆಯ್ಕೆಸಮಿತಿಯು ಪುರಸ್ಕಾರಕ್ಕೆ ಅರ್ಹತೆ ಪಡೆದ ಪ್ರತಿ ತಾಲ್ಲೂಕಿನ ಐದು ಗ್ರಾಮ ಪಂಚಾಯತಿಗಳಲ್ಲಿ ಪ್ರತಿ ತಾಲ್ಲೂಕಿಗೆ ಒಂದು ಗ್ರಾಮ ಪಂಚಾಯತಿಯನ್ನು 2022-23 ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಆಯ್ಕೆ ಮಾಡುವುದು.
6. ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಪುರಸ್ಕಾರಕ್ಕೆ ಅರ್ಹತೆ ಪಡೆದಿರುವ ಐದು ಗ್ರಾಮ ಪಂಚಾಯತಿಗಳು ಉತ್ತರಿಸಿರುವ ಅಂಶಗಳನ್ನಾಧರಿಸಿ ದಾಖಲಾತಿಗಳನ್ನು ಆ ಗ್ರಾಮ ಪಂಚಾಯತಿ ಇರುವ ತಾಲ್ಲೂಕು ಹೊರತುಪಡಿಸಿ ಬೇರೆ ತಾಲ್ಲೂಕಿನ ಅಧಿಕಾರಿಗಳನ್ನು ನೇಮಿಸಿ ಪರಿಶೀಲನೆ ನಡೆಸುವುದು.
7. ನಂತರ ಜಿಲ್ಲಾ ಪರಿಶೀಲನಾ /ಆಯ್ಕೆ ಸಮಿತಿಯು ಪುರಸ್ಕಾರಕ್ಕೆ ಅರ್ಹತೆ ಪಡೆದ ಗ್ರಾಮ ಪಂಚಾಯತಿಗಳಲ್ಲಿ ಪ್ರತಿ ತಾಲ್ಲೂಕಿಗೆ ಒಂದು ಗ್ರಾಮ ಪಂಚಾಯತಿಯನ್ನು 2022-23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಆಯ್ಕೆ ಮಾಡುವುದು.
8. ಒಂದು ವೇಳೆ ಯಾವುದಾದರೂ ಗ್ರಾಮ ಪಂಚಾಯತಿಗಳು ತಪ್ಪು ಮಾಹಿತಿ ನಮೂದಿಸಿರುವುದು ಕಂಡು ಬಂದರೆ ಅಂತಹ ಗ್ರಾಮ ಪಂಚಾಯತಿಗಳು ಪ್ರಶಸ್ತಿಗೆ ಅನರ್ಹವೆಂದು ಪರಿಗಣಿಸುವುದು.
9. ಕ್ರಮ ಸಂಖ್ಯೆ(6)ರಂತೆ ಆಯ್ಕೆ ಮಾಡಲಾದ ಗ್ರಾಮ ಪಂಚಾಯತಿಗಳಿಗೆ ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಿ, ಆಕ್ಷೇಪಣೆಗಳನ್ನು ಇತ್ಯರ್ಥಗೊಳಿಸಿ, ನಂತರ ಪ್ರತಿ ತಾಲ್ಲೂಕಿಗೆ ಒಂದರಂತೆ ಗ್ರಾಮ ಪಂಚಾಯತಿಗಳನ್ನು ಪುರಸ್ಕಾರಕ್ಕಾಗಿ ಜಿಲ್ಲಾ ಮಟ್ಟದಲ್ಲಿ ಅಂತಿಮಗೊಳಿಸಿ ಸ್ಪಷ್ಟ ಅಭಿಪ್ರಾಯದೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು.
10. ಈ ರೀತಿ ಸಲ್ಲಿಕೆಯಾದ ಪ್ರಸ್ತಾವನೆಗಳನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ನೇತೃತ್ವದ ರಾಜ್ಯ ಮಟ್ಟದ ಪರಾಮರ್ಶೆ ಸಮಿತಿಯಲ್ಲಿ 2022-23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಗ್ರಾಮ ಪಂಚಾಯತಿಗಳನ್ನು ಅಂತಿಮಗೊಳಿಸಲಾಗುವುದು.

2022-23ನೇ ಸಾಲಿನ "ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ" ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಲು Google Forms ತಂತ್ರಾಂಶದಲ್ಲಿ ಪ್ರಶ್ನಾವಳಿಗಳನ್ನು ಅಳವಡಿಸುವಂತೆ ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಂಸ್ಥೆ (SIRD) , ಮೈಸೂರು ಇವರಿಗೆ ತಿಳಿಸಲಾಗಿರುತ್ತದೆ, ಅದರಂತೆ Google Forms ತಂತ್ರಾಂಶದಲ್ಲಿ ಸಿದ್ಧಪಡಿಸಿರುವ ಪ್ರಶ್ನಾವಳಿಗಳನ್ನು ದಿನಾಂಕ:01-08-2023 ರಂದು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಇ-ಮೇಲ್ ಮೂಲಕ ಪ್ರತ್ಯೇಕವಾಗಿ ಕಳುಹಿಸಲಾಗಿರುತ್ತದೆ.

**ಅರ್ಜಿ ಸಲ್ಲಿಸಲು ಗೊತ್ತುಪಡಿಸಲಾದ ವೇಳಾಪಟ್ಟಿ:**

1. Google Forms ತಂತ್ರಾಂಶದಲ್ಲಿ 2022-23ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರದ ಅರ್ಜಿಯ ಲಭ್ಯತೆ ಮತ್ತು ಗ್ರಾಮಪಂಚಾಯತಿಗಳು ಅರ್ಜಿಯನ್ನು ಸಲ್ಲಿಸುವ ಅವಧಿ:- **ದಿನಾಂಕ:07.08.2023ರಿಂದ23.08.2023ರವರೆಗೆ**
2. ಗ್ರಾಮ ಪಂಚಾಯಿತಿಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಅರ್ಹತೆ ಪಡೆದ ಗ್ರಾಮ ಪಂಚಾಯಿತಿಗಳ ಪೈಕಿ ಪ್ರತಿ ತಾಲ್ಲೂಕಿಗೆ ಐದರಂತೆ ಹೆಚ್ಚು ಅಂಕ ಗಳಿಸಿದ ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿ **ದಿನಾಂಕ: 04-09-2023ರೊಳಗಾಗಿ** ಅಬ್ದುಲ್ ನಜೀರ್ ಸಾಬ್, ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ (ANSSIRD) ರವರು ಜಿಲ್ಲಾ ಪಂಚಾಯಿತಿಗಳಿಗೆ ಕಳುಹಿಸುವುದು.
3. ಜಿಲ್ಲಾ ಮಟ್ಟದ ಪರಿಶೀಲನಾ/ಆಯ್ಕೆ ಸಮಿತಿಯ ತಾಲ್ಲೂಕು ನೋಡಲ್ ಅಧಿಕಾರಿಗಳು ದಿನಾಂಕ:**05.09.2023 ರ** ನಂತರ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಪ್ರಶ್ನಾವಳಿಗಳ ಬಗ್ಗೆ ಭೌತಿಕವಾಗಿ ಪರಿಶೀಲಿಸಿ **ದಿನಾಂಕ:-13.09.2023 ರೊಳಗಾಗಿ** ಅಂತಿಮ ವರದಿಯನ್ನು ಜಿಲ್ಲಾ ಪಂಚಾಯಿತಿಗೆ ಸಲ್ಲಿಸುವುದು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಮಟ್ಟದ ಪರಿಶೀಲನಾ /ಆಯ್ಕೆ ಸಮಿತಿಯ ತಾಲ್ಲೂಕು ನೋಡಲ್ ಅಧಿಕಾರಿಗಳಿಂದ ಮಾಹಿತಿ ಪಡೆದ ನಂತರ ಪರಿಶೀಲಿಸಿ ಪ್ರತಿ ತಾಲ್ಲೂಕಿಗೆ ಒಂದರಂತೆ ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು **ಕೊನೆಯ ದಿನಾಂಕ:-19.09.2023.**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ತಪ್ಪದೇ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಅರ್ಜಿಯನ್ನು ಸಲ್ಲಿಸಲು ಸೂಕ್ತ ನಿರ್ದೇಶನ ಹಾಗೂ ಮಾರ್ಗದರ್ಶನಗಳನ್ನು ನೀಡಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕೆ ಸಂಪೂರ್ಣ ಸಹಕಾರ ನೀಡುವಂತೆ ಕೋರಿದೆ.

ಆಯುಕ್ತರು,
ಕರ್ನಾಟಕಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

**ಪ್ರತಿಯನ್ನು ಅಗತ್ಯಕ್ರಮಕ್ಕಾಗಿ:-**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಂಸ್ಥೆ(ANSSIRD), ಲಲಿತ್ ಮಹಲ್ ರಸ್ತೆ, ಮೈಸೂರು.
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕಅಧಿಕಾರಿಗಳು (ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕಅಧಿಕಾರಿಗಳ ಮುಖಾಂತರ)
5. ಕರ್ನಾಟಕ ವಿಕಾಸ ಪ್ರಕಟಣೆಗಾಗಿ
6. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು
7. ಮಾಹಿತಿ ಕೇಂದ್ರ/ ವೆಬ್‌ಸೈಟ್, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.

**ಪ್ರತಿಯನ್ನುಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

2. ಸನ್ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರುರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ ಬೆಂಗಳೂರು.
5. ಆಯುಕ್ತರು, ಕರ್ನಾಟಕ ಪಂಚಾಯತ್‌ರಾಜ್ ಆಯುಕ್ತಾಲಯ ರವರ ಆಪ್ತಸಹಾಯಕರು, ಬೆಂಗಳೂರು.
6. ಶಾಖಾ ರಕ್ಷಾ ಕಡತಕ್ಕೆ /ಹೆಚ್ಚುವರಿ ಪ್ರತಿ